# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 936
ಸದಸ್ಯರ ಹೆಸರು : ಶ್ರೀ ಸುನೀಲ್ ವಲ್ಯಾಪುರ್
ಉತ್ತರಿಸುವ ಸಚಿವರು : ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರು
ಉತ್ತರಿಸುವ ದಿನಾಂಕ : 24.07.2024

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ. | ಶಕ್ತಿ ಯೋಜನೆಗಾಗಿ 2024-25ನೇ ಸಾಲಿಗಾಗಿ ಸರ್ಕಾರ ಮೀಸಲಿಟ್ಟ ಅನುದಾನ ಎಷ್ಟು; ಅದರಲ್ಲಿ ಎಷ್ಟು ಅನುದಾನ ಬಿಡುಗಡೆಯಾಗಿದೆ; ಯಾವ ಯಾವ ನಿಗಮಗಳಿಗೆ ಎಷ್ಟು ಅನುದಾನ ಒದಗಿಸಲಾಗಿದೆ;(ಸಂಪೂರ್ಣ ಮಾಹಿತಿ ನೀಡುವುದು) | ಶಕ್ತಿ ಯೋಜನೆಯಡಿ ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳಾದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಮತ್ತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಗಳಿಗೆ 2024-25ನೇ ಸಾಲಿನ ಆಯವ್ಯಯದಲ್ಲಿ ಒಟ್ಟಾರೆಯಾಗಿ ರೂ.501500.00 ಲಕ್ಷಗಳ ಅನುದಾನ ಒದಗಿಸಲಾಗಿದೆ. ಅದರಲ್ಲಿ ನಿಗಮವಾರು ಬಿಡುಗಡೆಯಾಗಿರುವ ಅನುದಾನದ ವಿವರ ಕೆಳಕಂಡಂತಿದೆ:- (ರೂ.ಲಕ್ಷಗಳಲ್ಲಿ) |

(ರೂ.ಲಕ್ಷಗಳಲ್ಲಿ)

| ನಿಗಮ | ಬಿಡುಗಡೆಯಾದ ಅನುದಾನ |
|---|---|
| ಕ.ರಾ.ರ.ಸಾ.ನಿಗಮ | 63506.64 |
| ಬೆಂ.ಮ.ಸಾ.ಸಂಸ್ಥೆ | 28819.52 |
| ವಾ.ಕ.ರ.ಸಾ.ಸಂಸ್ಥೆ | 41072.80 |
| ಕ.ಕ.ರ.ಸಾ.ನಿಗಮ | 33767.68 |
| ಒಟ್ಟು | **167166.64** |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಆ. | ಶಕ್ತಿ ಯೋಜನೆ ಜಾರಿಯಾದಾಗಿನಿಂದ ಇಲ್ಲಿಯವರಿಗೆ ರಾಜ್ಯದ ಮಹಿಳೆಯರು ಉಚಿತ ಪ್ರಯಾಣ ಮಾಡಿದ ಮೊತ್ತ ಎಷ್ಟು; ಈ ಯೋಜನೆಗೆ ಷರತ್ತು ವಿಧಿಸುವ ಯೋಚನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ ಯಾವ ಮಿತಿಗಳನ್ನು ಹೇರಲಾಗುವುದು; | ಶಕ್ತಿ ಯೋಜನೆ ಜಾರಿಯಾದಾಗಿನಿಂದ ರಾಜ್ಯದ ನಾಲ್ಕು ಸಾರಿಗೆ ಸಂಸ್ಥೆಗಳಿಂದ ದಿನಾಂಕ:11.06.2024 ರಿಂದ 30.06.2024ರವರೆಗೆ ರಾಜ್ಯದ ಮಹಿಳೆಯರು ಉಚಿತ ಪ್ರಯಾಣ ಮಾಡಿದ ವಿವರ ಕೆಳಕಂಡಂತಿದೆ:- |

(ರೂ. ಕೋಟಿಗಳಲ್ಲಿ)

| ನಿಗಮ | ವೆಚ್ಚದ ಮೊತ್ತ |
|---|---|
| ಕ.ರಾ.ರ.ಸಾ.ನಿಗಮ | 2244.71 |
| ಬೆಂ.ಮ.ಸಾ.ಸಂಸ್ಥೆ | 994.76 |
| ವಾ.ಕ.ರ.ಸಾ.ಸಂಸ್ಥೆ | 1433.38 |
| ಕ.ಕ.ರ.ಸಾ.ನಿಗಮ | 1194.15 |
| ಒಟ್ಟು | **5867.00** |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| | | **ಈ ಯೋಜನೆಗೆ ಈಗಾಗಲೇ ಸರ್ಕಾರದ ಆದೇಶ ಸಂಖ್ಯೆ:ಟಿಡಿ 18 ಟಿಸಿಬಿ 2023, ದಿನಾಂಕ:05.06.2023ರಲ್ಲಿ ಈ ಕೆಳಕಂಡ ಷರತ್ತುಗಳನ್ನು ವಿಧಿಸಲಾಗಿದೆ:-**<br>1. ರಾಜ್ಯದೊಳಗಿನ ಪ್ರಯಾಣಕ್ಕೆ ಮಾತ್ರ (ಎಲ್ಲಾ ಅಂತರ ರಾಜ್ಯ ಸಾರಿಗೆ ಅನುಸೂಚಿಗಳನ್ನು ಹೊರತುಪಡಿಸಿ) ಈ ಯೋಜನೆಯು ಅನ್ವಯಿಸತಕ್ಕದ್ದು.<br>2. ಐಷಾರಾಮಿ (Luxury)ಬಸ್‌ಗಳಾದ ರಾಜಹಂಸ,ನಾನ್-ಎ.ಸಿ. ಸ್ಲೀಪರ್ ಹಾಗೂ ವಜ್ರ, ವಾಯುವಜ್ರ, ಐರಾವತ, ಐರಾವತ ಕ್ಲಬ್ ಕ್ಲಾಸ್, ಐರಾವತ ಗೋಲ್ಡ್ ಕ್ಲಾಸ್, ಅಂಬಾರಿ, ಅಂಬಾರಿ ಡ್ರೀಮ್ ಕ್ಲಾಸ್, ಅಂಬಾರಿ ಉತ್ಸವ್, ಫ್ಲೈ ಬಸ್, ಇವಿ ಪವರ್ ಪ್ಲಸ್ (ಎ.ಸಿ ಬಸ್‌ಗಳು) ಈವುಗಳಿಗೆ ಈ ಯೋಜನೆಯು ಅನ್ವಯಿಸುವುದಿಲ್ಲ.<br>3. ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯು ಬಸ್ಸುಗಳನ್ನು ಹೊರತುಪಡಿಸಿ,ಉಳಿದ ರಸ್ತೆ ಸಾರಿಗೆ ಸಂಸ್ಥೆಗಳಾದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ, ವಾಯುವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆ ಮತ್ತು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮಗಳ ಎಲ್ಲಾ ಬಸ್‌ಗಳಲ್ಲಿ (ಅಂತರರಾಜ್ಯ, ಎ.ಸಿ. ಮತ್ತು ಐಷಾರಾಮಿ (Luxury)ಬಸ್‌ಗಳನ್ನು ಹೊರತುಪಡಿಸಿ) ಶೇ.50ರಷ್ಟು ಆಸನಗಳನ್ನು ಪುರುಷರಿಗೆ ಕಾಯ್ದಿರಿಸಕ್ಕದ್ದು.<br>4. ಈ ಯೋಜನೆಯಡಿ ನಾಲ್ಕು ಸಾರಿಗೆ ಸಂಸಥೆಗಳಿಗೆ ತಗಲುವ ವೆಚ್ಚವನ್ನು ಸರ್ಕಾರದಿಂದ ಶೂನ್ಯ ಟಿಕೆಟ್/ಶಕ್ತಿ ಸ್ಮಾರ್ಟ್ ಕಾರ್ಡ್ ದತ್ತಾಂಶವನ್ನು ಆಧರಿಸಿ ಭರಿಸಲಾಗುವುದು.(Reimbursement to Road Transport Corporation would be made on the basis of actual distance travelled by women passengers)<br>5. ಸೇವಾ ಸಿಂಧು ಮೂಲಕ ಅರ್ಜಿಗಳನ್ನು ಪಡೆದು, "ಶಕ್ತಿ ಸ್ಮಾರ್ಟ್ ಕಾರ್ಡ್"ಗಳನ್ನು ವಿತರಿಸುವ ಪ್ರಕ್ರಿಯೆಯನ್ನು ಮುಂದಿನ ಮೂರು ತಿಂಗಳೊಳಗಾಗಿ ಪೂರ್ಣಗೊಳಿಸತಕ್ಕದ್ದು.<br>6. "ಶಕ್ತಿ ಸ್ಮಾರ್ಟ್ ಕಾರ್ಡ್"ನ್ನು ವಿತರಿಸುವವರೆಗೆ ಭಾರತ ಸರ್ಕಾರ/ಕರ್ನಾಟಕ ಸರ್ಕಾರದ ಇಲಾಖೆ/ಸರ್ಕಾರಿ ಸ್ವಾಮ್ಯದ ಕಛೇರಿಗಳಿಂದ ವಿತರಿಸಿರುವ ಭಾವಚಿತ್ರ ಹಾಗೂ ವಾಸದ ವಿಳಾಸವಿರುವ ಗುರುತಿನ ಚೀಟಿಗಳನ್ನು ಶೂನ್ಯ ಟಿಕೆಟ್ ವಿತರಿಸುವ ಸಂದರ್ಭದಲ್ಲಿ ಪರಿಗಣಿಸತಕ್ಕದ್ದು.<br>7. ಅನುಬಂಧದಲ್ಲಿ ಲಗತ್ತಿಸಿರುವ ಕೆಲವು ಆಯ್ದ ಅಂತರರಾಜ್ಯ ಸಾರಿಗೆಗಳಲ್ಲಿ ರಾಜ್ಯದ ಗಡಿಯವರೆಗೆ (ಕರ್ನಾಟಕ ರಾಜ್ಯದ ಒಳಗಡೆ ಮಾತ್ರ) ಮತ್ತು ಎನ್‌ಕ್ಲೇವ್ ಸಾರಿಗೆಗಳಲ್ಲಿ ಮಾತ್ರ ಅನ್ವಯಿಸತಕ್ಕದ್ದು.<br>8. ಯಾವುದೇ ಹೆಚ್ಚುವರಿ ಸಹಾಯಧನವನ್ನು ಒದಗಿಸಲಾಗುವುದಿಲ್ಲ.<br><br>ಮೇಲ್ಕಂಡ ಷರತ್ತುಗಳನ್ನು ಹೊರತುಪಡಿಸಿ ಇನ್ಯಾವುದೇ ಷರತ್ತುಗಳನ್ನು ವಿಧಿಸುವ ಪ್ರಸ್ತಾವನೆ ಪ್ರಸ್ತುತ ಸರ್ಕಾರದ ಪರಿಶೀಲನೆಯಲ್ಲಿ ಇರುವುದಿಲ್ಲ. |

